ಕ್ರ.ಸಂ 330

File No. MED/104/MPS/2023-US1-MEDICAL EDUCATION SEC (Computer No. 1016708)

6664

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ-330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ.**

**ವಿಷಯ:-** ಮಂಡ್ಯ ಕ್ಯಾನ್ಸರ್ ಆಸ್ಪತ್ರೆಯಲ್ಲಿ ವೈದ್ಯರ ಮತ್ತು ಲ್ಯಾಬ್ ಟೆಕ್ನೀಷಿಯನ್‌ಗಳ ಕೊರತೆ, ಉಪಕರಣಗಳು ದುರಸ್ತಿಯಾಗಿರುವುದಲ್ಲದೆ ಅತೀವ ಮೂಲಭೂತಸೌಲಭ್ಯಗಳ ಕೊರತೆಯಿಂದ ರೋಗಿಗಳಿಗೆ ಸಕಾಲದಲ್ಲಿ ಚಿಕಿತ್ಸೆ ದೊರೆಯದೆ ತುಂಬಾ ತೊಂದರೆಗೀಡಾಗಿರುವ ಗಂಭೀರ ಸಮಸ್ಯೆ ಕುರಿತು.

******

**ಉತ್ತರ:-** ಮಂಡ್ಯ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಕ್ಯಾನ್ಸರ್ ಕೇಂದ್ರವನ್ನು ಟರ್ಷಿಯರಿ ಕ್ಯಾನ್ಸರ್ ಕೇರ್ ಕೇಂದ್ರವನ್ನಾಗಿ ಉನ್ನತೀಕರಿಸಿ 2007 ರಲ್ಲಿ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ವರ್ಗಾಯಿಸಿದ್ದು, ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಿಬ್ಬಂದಿಗಳನ್ನು ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ವಿಲೀನಗೊಳಿಸಲಾಗಿದೆ.

ಕೇಂದ್ರ ಸರ್ಕಾರದ ಸಹಯೋಗದೊಂದಿಗೆ National Programe for Prevention and Control of Cancer, Diabetes, Cardiovascular Diseases and Stroke (NPCDCS) ಯೋಜನೆಯಡಿ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿರುವ ಹಳೆಯದಾದ ಫೆರಿಫೆರಲ್ ಕ್ಯಾನ್ಸರ್ ಕೇಂದ್ರವನ್ನು ರೂ.4500.00 ಲಕ್ಷಗಳ ಅನಾವರ್ತಕ ವೆಚ್ಚ ಹಾಗೂ ರೂ.1118.00 ಲಕ್ಷಗಳ ಆವರ್ತಕ ವೆಚ್ಚಗಳನ್ನೊಳಗೊಂಡಂತೆ ಒಟ್ಟಾರೆ ಅಂದಾಜು ವೆಚ್ಚ ರೂ.5618.00 ಲಕ್ಷಗಳ ಮೊತ್ತದಲ್ಲಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗೆ ಮಂಜೂರಾತಿ ನೀಡಿ ಸರ್ಕಾರಿ ಆದೇಶ ಸಂಖ್ಯೆ:ಆಕುಕ 228 ಎಂಪಿಎಸ್ 2016, ದಿ:21.03.2017 ರಲ್ಲಿ ಈಗಾಗಲೇ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಈ ಕಾಮಗಾರಿಗೆ ಇದುವರೆವಿಗೆ ಕೇಂದ್ರ ಮತ್ತು ರಾಜ್ಯದ ಪಾಲು ಸೇರಿ ಒಟ್ಟಾರೆ ರೂ.30.02 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಅಧೀನದಲ್ಲಿನ ಫೆರಿಫೆರಲ್ ಕ್ಯಾನ್ಸರ್ ಕೇರ್ ಕೇಂದ್ರಕ್ಕೆ ಬರುವ ರೋಗಿಗಳ ಚಿಕಿತ್ಸೆಯ ದೃಷ್ಟಿಯಿಂದ ಶ್ರೀಮತಿ ಮಹಿತಾ ಕೆ.ಸಿ. ರೇಡಿಯೇಷನ್ ಸೇಫ್ಟಿ ಆಫೀಸರ್, ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಇವರನ್ನು ನಿಯೋಜನೆ ಮೇಲೆ ಮಂಡ್ಯ ಕ್ಯಾನ್ಸರ್ ಸಂಸ್ಥೆಗೆ ನೇಮಿಸಲಾಗಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಸರ್ಜಿಕಲ್ ಆಂಕಾಲಜಿಸ್ಟ್ ರವರು ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ವೈದ್ಯಾಧಿಕಾರಿಗಳು ಮತ್ತು ಇತರೆ ಹುದ್ದೆಗಳ ನೇಮಕಾತಿ ಬಗ್ಗೆ ಸಂಸ್ಥೆಯ ಆಡಳಿತ ಪರಿಷತ್ ಸಭೆಯಲ್ಲಿ ನಿರ್ಣಯಿಸಿದಂತೆ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯವರಿಗೆ ಟರ್ಷಿಯರಿ ಕ್ಯಾನ್ಸರ್ ಕೇರ್ ಕೇಂದ್ರಕ್ಕೆ ಅಗತ್ಯವಾದ ವೈದ್ಯರು ಮತ್ತು ಇತರೆ ಸಿಬ್ಬಂದಿಗಳ ವಿವರವನ್ನು ನೀಡಲು ಕೋರಲಾಗಿದ್ದು; ಸದರಿಯವರು ನೀಡುವ ವರದಿಯಂತೆ ವೈದ್ಯರು ಮತ್ತು ಇತರೆ ಸಿಬ್ಬಂದಿಗಳ ನೇಮಕಾತಿಗೆ ಕ್ರಮವಹಿಸಲಾಗಿದೆ.

ಯಂತ್ರೋಪಕರಣಗಳನ್ನು ಖರೀದಿಸುವ ಸಂಬಂಧ ಈಗಾಗಲೇ 3 ಬಾರಿ ಟೆಂಡರ್‌ಗಳನ್ನು ಕರೆಯಲಾಗಿದ್ದು, ಮೊದಲನೇ ಬಾರಿಗೆ ಕರೆಯಲಾದ ಟೆಂಡರ್‌ನಲ್ಲಿ ಯಾವೊಂದು ಸಂಸ್ಥೆಗಳೂ ಸಹ ಭಾಗವಹಿಸಿರುವುದಿಲ್ಲ. ಎರಡನೇ ಬಾರಿಗೆ ಕರೆಯಲಾದ ಟೆಂಡರ್ ಸಿಂಗಲ್ ಬಿಡ್ ಟೆಂಡರ್ ಆಗಿರುತ್ತದೆ. ಮೂರನೇ ಬಾರಿಗೆ ಕರೆಯಲಾದ ಟೆಂಡರ್ ಪ್ರಕ್ರಿಯೆಯಲ್ಲಿ ಕೇಂದ್ರ ಸರ್ಕಾರವು ಉಪಕರಣಕ್ಕೆ ನಿಗದಿಪಡಿಸಲಾಗಿರುವ Ceiling Price ಗಿಂತ ಅಧಿಕವಾಗಿ ದರ ಸ್ವೀಕೃತವಾದುದರಿಂದ ನಿಯಮಾನುಸಾರ ಬಿಡ್‌ನ್ನು ತಿರಸ್ಕರಿಸಲಾಗಿರುತ್ತದೆ.

ಆದಾಗ್ಯೂ, ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಹಾಲಿ ಶಸ್ತ್ರಚಿಕಿತ್ಸೆ-ಅಗತ್ಯವಿರುವ ಕ್ಯಾನ್ಸರ್ ರೋಗಿಗಳಿಗೆ ಶಸ್ತ್ರಚಿಕಿತ್ಸೆ ಹಾಗೂ ಕಿಮೋಥೆರಪಿ ಸೌಲಭ್ಯವನ್ನು ನೀಡಲಾಗುತ್ತಿದೆ.

ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿರುವ ಟರ್ಷಿಯರಿ ಕ್ಯಾನ್ಸರ್ ಕೇರ್ ಸೆಂಟರ್ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಸಂಬಂಧದ ಸಿವಿಲ್ ಕಾಮಗಾರಿಗಾಗಿ ನಿಗದಿಪಡಿಸಲಾಗಿದ್ದ ಅನುದಾನವನ್ನು ಬಿಡುಗಡೆಗೊಳಿಸಲಾಗಿದ್ದು, ಸದರಿ ಅನುದಾನವನ್ನು ಸಂಪೂರ್ಣವಾಗಿ ಬಳಸಿಕೊಳ್ಳಲಾಗಿರುತ್ತದೆ ಹಾಗೂ ಸಿವಿಲ್ ಕಾಮಗಾರಿಯು ಶೇಕಡ 90 ರಷ್ಟು ಭಾಗ ಪೂರ್ಣಗೊಂಡಿರುತ್ತದೆ.

ಮುಂದುವರೆದು, ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿರುವ ಟರ್ಷಿಯರಿ ಕ್ಯಾನ್ಸರ್ ಕೇರ್ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಸಿವಿಲ್ ಕಾಮಗಾರಿಯ ಮೂಲ ಅಂದಾಜು ಮೊತ್ತವು ರೂ.1175.00 ಲಕ್ಷಗಳಿಂದ ರೂ.1740.00 ಲಕ್ಷಗಳಿಗೆ ಪರಿಷ್ಕೃತಗೊಂಡಿದ್ದು, ಈ ಪರಿಷ್ಕೃತ



Generated from eOffice by DR K SUDHAKAR, MED-MINISTER, MINISTER, MEDICAL EDUCATION SEC on 15/02/2023 ...

DFA/1066664

ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿ ನಿರ್ದೇಶಕರು, ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಇವರಿಂದ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಅನುದಾನ ಬಿಡುಗಡೆ ಮಾಡಲು ಕಡತವನ್ನು ಆರ್ಥಿಕ ಇಲಾಖೆ ಕಳುಹಿಸಲಾಗಿದೆ.

**ಸಂಖ್ಯೆ:** ಎಂಇಡಿ 104 ಎಂಪಿಎಸ್ 2023

**(ಡಾ: ಕೆ. ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು



Generated from eOffice by DR K SUDHAKAR, MED-MIN(SK), MINISTER, MEDICAL EDUCATION SEC on 15/02/2023 03:13 PM